**H.D. DEVE GOWDA**
National President

**Janata Dal** (Secular)
No. 5, Safdarjung Lane, New Delhi - 110 011
Ph. : 011 - 23794499, Fax : 011 - 23010288

ದಿನಾಂಕ:16-11-2023

## ಅಮಾನತ್ತು ಆದೇಶ

ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ), ಹಿಂದಿನ ಮಹಾ ಪ್ರಧಾನ ಕಾರ್ಯದರ್ಶಿಗಳು ಮತ್ತು ವಿಧಾನ ಪರಿಷತ್ ಶಾಸಕರಾದ ಶ್ರೀ ಎಸ್.ಎಲ್. ಬೋಜೇಗೌಡ ರವರು ದಿನಾಂಕ: 19-10-2023ರ ವರದಿಯಲ್ಲಿ ಕರ್ನಾಟಕ ರಾಜ್ಯ ಪರಿಷತ್‌ನ ಪ್ರಸ್ತುತ ಕಾರ್ಯಕಾರಿ ಸಮಿತಿ, ಪಕ್ಷದ ಸಂಘಟನೆ ಮತ್ತು ಬಲವರ್ಧನೆ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸಿರುವುದಿಲ್ಲ ಹಾಗೂ ಸದಸ್ಯತ್ವ ನೊಂದಣಿ ಅಭಿಯಾನ ಕೈಗೊಂಡಿರುವುದಿಲ್ಲ ಎಂದು ತಿಳಿಸಿದ್ದಾರೆ.

ಮುಂದುವರೆದು, ಪಕ್ಷದ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿಲ್ಲ, ರಾಜ್ಯಾಧ್ಯಕ್ಷರು ಒಳಗೊಂಡಂತೆ ರಾಜ್ಯ ಪರಿಷತ್‌ನ ಕಾರ್ಯಕಾರಿ ಸಮಿತಿ ನಿಷ್ಕ್ರಿಯವಾಗಿರುವುದಾಗಿಯೂ ಸಹ ವರದಿಯಲ್ಲಿ ತಿಳಿಸಿರುತ್ತಾರೆ.

ಮುಂದುವರೆದು, ದಿನಾಂಕ: 06-09-2023, 10-09-2023 ಮತ್ತು 01-10-2023 ರಂದು ನಡೆದ ಪಕ್ಷದ ಸಭೆಗಳಲ್ಲಿ ಪಕ್ಷದ ಹಿತದೃಷ್ಟಿಯಿಂದ ಮತ್ತು ಪಕ್ಷವನ್ನು ಸಂಘಟನೆ, ಬಲವರ್ಧಿಸಲು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷದಿಂದ ಮೈತ್ರಿ/ಹೊಂದಾಣಿಕೆ ಮಾಡಿಕೊಳ್ಳಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಲಾಗಿದೆ ಮತ್ತು ಈ ಹೊಂದಾಣಿಕೆ ಬಗ್ಗೆ ಬಿಜೆಪಿ ಮುಖಂಡರೊಂದಿಗೆ ಚರ್ಚಿಸಲು ಪಕ್ಷ ರಾಷ್ಟ್ರಾಧ್ಯಕ್ಷರು, ರಾಜ್ಯಾಧ್ಯಕ್ಷರು ಹಾಗೂ ಶಾಸಕಾಂಗ ಪಕ್ಷದ ನಾಯಕರಿಗೆ ಅಧಿಕಾರ ನೀಡಲು ತೀರ್ಮಾನಿಸಲಾಗಿದೆ. ಈ ಮೇಲಿನ ಸಭೆಗಳಲ್ಲಿ ಶ್ರೀ ಸಿ.ಎಂ. ಇಬ್ರಾಹಿಂ ರವರು ಉಪಸ್ಥಿತರಿದ್ದು, ಚರ್ಚೆಯಲ್ಲಿ ಮತ್ತು ತೀರ್ಮಾನದಲ್ಲಿ ಪಾಲುದಾರರಾಗಿದ್ದು, ತದನಂತರ ಈ ತೀರ್ಮಾನದ ವಿರುದ್ಧ ವಿರೋಧಭಾಸ ಹೇಳಿಕೆ ನೀಡುತ್ತಿರುವುದಾಗಿ ವರದಿಯಾಗಿದೆ.

ಈ ಹಿನ್ನಲೆಯಲ್ಲಿ ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಪಕ್ಷದ ರಾಜ್ಯಾಧ್ಯಕ್ಷರನ್ನೊಳಗೊಂಡ ಕಾರ್ಯಕಾರಿ ಸಮಿತಿಯ ಪದಾಧಿಕಾರಿಗಳನ್ನು ಜನತಾದಳ (ಜಾತ್ಯತೀತ) ಪಕ್ಷದ ಸಂವಿಧಾನದ Article XX (10) ರನ್ವಯ ದಿನಾಂಕ:19-10-2023ರಂದು ವಿಸರ್ಜನೆ ಮಾಡಿ ಆದೇಶ ಹೊರಡಿಸಲಾಗಿದೆ.

JANATA DAL NEW DELHI SECULAR



Office : No. 19/1, Platform Road, Sheshadripuram, Bengaluru - 560 020
Ph : 080 - 23461944 / 23461710

Scanned with CamScanner

H.D. DEVE GOWDA
National President

Janata Dal (Secular)
No. 5, Safdarjung Lane, New Delhi - 110 011
Ph. : 011 - 23794499, Fax : 011 - 23010288

ತದನಂತರ, ಹಿಂದಿನ ರಾಜ್ಯಾಧ್ಯಕ್ಷರಾದ ಶ್ರೀ ಇಬ್ರಾಹಿಂ ರವರು ದಿನಾಂಕ: 16-10-2023ರಂದು, ಬೆಂಗಳೂರಿನಲ್ಲಿ ಚಿಂತನ-ಮಂಥನ ಎನ್ನುವ ಹೆಸರಿನ ಪಕ್ಷದ ಸಮಾನಂತರ ಸಭೆಯನ್ನು ಕರೆದು, ಜೆಡಿಎಸ್-ಬಿಜೆಪಿ ಹೊಂದಾಣಿಕೆ ಬಗ್ಗೆ ಸಭೆಯಲ್ಲಿ ವಿರೋಧ ವ್ಯಕ್ತಪಡಿಸುತ್ತಾ ಪಕ್ಷದ ರಾಷ್ಟ್ರಾಧ್ಯಕ್ಷರು ಮತ್ತು ರಾಜ್ಯ ಶಾಸಕಾಂಗ ಪಕ್ಷದ ನಾಯಕರ ವಿರುದ್ಧ ಬೇಜವಾಬ್ದಾರಿಯುತ ಹೇಳಿಕೆ ಮತ್ತು ಸುಳ್ಳು ಆರೋಪಗಳನ್ನು ಸಾರ್ವಜನಿಕವಾಗಿ ಮಾಧ್ಯಮಗಳಲ್ಲಿ ಮಾಡಿರುವುದಾಗಿ ವರದಿಯಾಗಿದೆ.

ಮುಂದುವರೆದು, ದಿನಾಂಕ: 07-11-2023ರಂದು ಜನತಾದಳ (ಜಾತ್ಯತೀತ) ಪಕ್ಷದ ಜಿಲ್ಲಾಧ್ಯಕ್ಷರು ಮತ್ತು ಪಕ್ಷದ ರಾಜ್ಯ ಮಟ್ಟದ ವಿಭಾಗ ಮುಖ್ಯಸ್ಥರನ್ನು ಉದ್ದೇಶಿಸಿ ಶ್ರೀ ಸಿ.ಎಂ. ಇಬ್ರಾಹಿಂ ರವರು ಬರೆದಿರುವ ಪತ್ರದಲ್ಲಿ ದಿನಾಂಕ: 19-10-2023ರಂದು ರಾಜ್ಯ ಕಾರ್ಯಕಾರಿ ಸಮಿತಿಯ ರಾಜ್ಯಾಧ್ಯಕ್ಷರನ್ನು ಒಳಗೊಂಡಂತೆ ಪದಾಧಿಕಾರಿಗಳನ್ನು ವಿಸರ್ಜನೆ ಮಾಡಿರುವುದು ಕಾನೂನು ಬಾಹಿರ ಮತ್ತು ಏಕಪಕ್ಷೀಯ ನಿರ್ಧಾರವೆಂದು ತಿಳಿಸಿ, ತಾನು ಇನ್ನೂ ರಾಜ್ಯಾಧ್ಯಕ್ಷನಾಗಿ ಮುಂದುವರೆದು, ಕಾರ್ಯನಿರ್ವಹಿಸುತ್ತಿರುವುದಾಗಿ, ಹಾಗಾಗಿ ಪಕ್ಷದ ಜಿಲ್ಲಾಧ್ಯಕ್ಷರು ಮತ್ತು ವಿವಿಧ ವಿಭಾಗಗಳ ಮುಖ್ಯಸ್ಥರು ತಮ್ಮ ಹುದ್ದೆಗಳಲ್ಲಿ ಮುಂದುವರೆದಿದ್ದಾರೆಂದು ತಿಳಿಸುತ್ತಾ, ಬಿಜೆಪಿ ಪಕ್ಷದೊಂದಿಗೆ ಹೊಂದಾಣಿಕೆ ಬಗ್ಗೆ ಒಲವು ಹೊಂದಿರುವವರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕೆಂದು ಸೂಚಿಸಿರುತ್ತಾರೆ.

ಅಲ್ಲದೇ, ದಿನಾಂಕ: 15-11-2023ರಂದು, ಕೇರಳ ರಾಜ್ಯದ ತಿರುವನಂತಪುರಂದಲ್ಲಿ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷರಾದ ಶ್ರೀ ಸಿ.ಕೆ. ನಾನು ರವರು ಪಕ್ಷದ ಹೆಸರಿನಲ್ಲಿ ಅನಧಿಕೃತವಾಗಿ ಕರೆದಿದ್ದ ರಾಷ್ಟ್ರೀಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗವಹಿಸಿ, ರಾಜ್ಯದಲ್ಲಿನ ಜೆಡಿಎಸ್-ಬಿಜೆಪಿ ಹೊಂದಾಣಿಕೆ ಬಗ್ಗೆ ವಿರೋಧಬಾಸ ಹೇಳಿಕೆ ನೀಡಿ, ಪಕ್ಷದ ಶಿಸ್ತನ್ನು ಉಲ್ಲಂಘಿಸಿದ್ದಾರೆ.

ಈ ಮೇಲಿನ ಎಲ್ಲಾ ಬೆಳವಣಿಗೆಗಳನ್ನು ಗಮನಿಸಿದಾಗ ಪಕ್ಷದ ಹಿಂದಿನ ರಾಜ್ಯಾಧ್ಯಕ್ಷರಾದ ಶ್ರೀ ಸಿ.ಎಂ. ಇಬ್ರಾಹಿಂ ರವರು ಸಾರ್ವಜನಿಕವಾಗಿ ಪಕ್ಷದ ರಾಷ್ಟ್ರಾಧ್ಯಕ್ಷರ, ರಾಜ್ಯ ಶಾಸಕಾಂಗ ಪಕ್ಷದ ನಾಯಕರ ವಿರುದ್ಧ ಹಾಗೂ ರಾಜ್ಯದಲ್ಲಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷದೊಂದಿಗೆ ಹೊಂದಾಣಿಕೆ ಬಗ್ಗೆ, ಪಕ್ಷದ ರಾಜ್ಯ ಪರಿಷತ್, ಶಾಸಕಾಂಗ ಪಕ್ಷದ ಸಭೆ, ಕೋರ್ ಸಮಿತಿ ಮುಂತಾದ ಸಭೆಗಳಲ್ಲಿ ಒಮ್ಮತವಾದ ನಿರ್ಣಯವಾಗಿದ್ದರೂ ಸಹ ಬಹಿರಂಗವಾಗಿ ಪಕ್ಷ ವಿರೋಧಿ ಹೇಳಿಕೆ ನೀಡಿ, ಪಕ್ಷದ ಹಿತಕ್ಕೆ ಧಕ್ಕೆ ತಂದಿರುತ್ತಾರೆ. ಇಂತಹ ನಡವಳಿಕೆ ಮತ್ತು ಹೇಳಿಕೆಗಳು ಪಕ್ಷದ ವಿರೋಧಿ ಚಟುವಟಿಕೆಗಳಾಗಿರುತ್ತವೆ.

JANATA DAL (SECULAR) NEW DELHI



Office : No. 19/1, Platform Road, Sheshadripuram, Bengaluru - 560 020
Ph : 080 - 23461944 / 23461710

Scanned with CamScanner

**H.D. DEVE GOWDA**
National President

**Janata Dal** (Secular)
No. 5, Safdarjung Lane, New Delhi - 110 011
Ph. : 011 - 23794499, Fax : 011 - 23010288

ಆದ್ದರಿಂದ, ಪಕ್ಷದ ಹಿತ ದೃಷ್ಟಿಯಿಂದ ಜನತಾದಳ (ಜಾತ್ಯತೀತ) ಪಕ್ಷದ ಸಂವಿಧಾನ ಮತ್ತು ನಿಯಮಾವಳಿಗಳ ಅಡಿಯಲ್ಲಿ Article XXII-Breach of Discipline-4 ಹಾಗೂ Punishment-6 ರನ್ವಯ ಶ್ರೀ ಸಿ.ಎಂ. ಇಬ್ರಾಹಿಂ ರವರನ್ನು ಈ ಕೂಡಲೇ ಜಾರಿಗೆ ಬರುವಂತೆ ಪಕ್ಷದಿಂದ ಅಮಾನತ್ತುಗೊಳಿಸಲಾಗಿದೆ.

(ಹೆಚ್.ಡಿ. ದೇವೇಗೌಡ)
ರಾಷ್ಟ್ರೀಯ ಅಧ್ಯಕ್ಷರು, ಜನತಾದಳ (ಜಾತ್ಯತೀತ)

JANATA DAL (SECULAR) NEW DELHI

ಗೆ,
ಶ್ರೀ ಸಿ.ಎಂ.ಇಬ್ರಾಹಿಂ ರವರು,
ಮಾಜಿ ಕೇಂದ್ರ ಸಚಿವರು,
ನಂ. 81, ಬೆನ್ಸನ್ ಕ್ರಾಸ್ ರಸ್ತೆ,
ಬೆನ್ಸನ್ ಟೌನ್,
ಬೆಂಗಳೂರು–560046.

ಗೆ:
ಮಾನ್ಯ ಸಂಪಾದಕರು/ಪ್ರತಿನಿಧಿಗಳು/ಎಲೆಕ್ಟ್ರಾನಿಕ್ ಮಾಧ್ಯಮದವರು.



Office : No. 19/1, Platform Road, Sheshadripuram, Bengaluru - 560 020
Ph : 080 - 23461944 / 23461710

Scanned with CamScanner